41

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ, ದಿನಾಂಕ:09ನೇ ಫೆಬ್ರವರಿ, 2018**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

### 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2018ನೇ ಫೆಬ್ರವರಿ, 05ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:06-02-2018ರಂದು **ಶ್ರೀ ಎಸ್. ರವಿ**ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ:

**(ಮೂರನೆಯ ದಿನ)**

### 03. ಗಮನ ಸೆಳೆಯುವ ಸೂಚನೆಗಳು

ಅ) **ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು, ಬಾಲ ಸೇವಿಕಾ ತರಬೇತಿ ಪಡೆದು ನರ್ಸರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲಾ ಶಿಕ್ಷಕಿಯರಾಗಿ ಸೇವೆ ಸಲ್ಲಿಸುತ್ತಿರುವವರಿಗೂ ಸಹ ಅನುದಾನಿತ ನೌಕರರಿಗೆ ನೀಡುತ್ತಿರುವಂತೆ ನಿವೃತ್ತಿ ಸೌಲಭ್ಯಗಳನ್ನು ಒದಗಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್** ಸಚಿವರ ಗಮನ ಸೆಳೆಯುವುದು.

.....2

ಆ) **ಶ್ರೀ ಐವನ್ ಡಿ'ಸೋಜಾ** ಅವರು, ರಾಜ್ಯದಲ್ಲಿರುವ ಅಡಿಕೆ ಬೆಳೆಗಾರರ ಸಮಸ್ಯೆಗಳಿಗೆ ಹಾಗೂ ಅಡಿಕೆ ಬೆಳೆಗೆ ಆಗುವ ತೊಂದರೆಗಳಿಗೆ ಅಡಿಕೆ ಬೆಳೆಗಾರರ ಮಂಡಳಿಯನ್ನು ರಚಿಸುವ ಬಗ್ಗೆ **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ** ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

ಅ) **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು, ಕಂದಾಯ ಇಲಾಖೆಯ ಗ್ರಾಮ ಮಟ್ಟದ ಗ್ರಾಮಕರಣೀಕರ ಕಛೇರಿಯಲ್ಲಿನ ಮೂಲ ಸೌಕರ್ಯದ ಕೊರತೆ, ಸ್ವಂತ ಕಟ್ಟಡಗಳಿಲ್ಲದೆ ಇರುವುದು ಹಾಗೂ ಸಿಬ್ಬಂದಿ ಕೊರತೆಯಿಂದಾಗಿ ಗ್ರಾಮದ ಕಛೇರಿಯಲ್ಲಿ ಸಾರ್ವಜನಿಕ ಸೇವೆಯಲ್ಲಿ ವಿಳಂಬ ನೀತಿ ಸೇರಿದಂತೆ ಇಲಾಖೆಯಲ್ಲಿನ ಸಮಸ್ಯೆಗಳು ಮತ್ತು ಆಡಳಿತಾತ್ಮಕ ವಿಷಯಗಳಲ್ಲಿನ ಲೋಪದ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

ಆ) **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು, ರಾಜ್ಯದಲ್ಲಿನ ಎಲ್ಲಾ ಮಾದರಿಯ ಖಾಸಗಿ ಶಾಲೆಗಳಲ್ಲಿ ಕನ್ನಡ ಭಾಷಾ ಬೋಧನೆಯನ್ನು ಕಡ್ಡಾಯಗೊಳಿಸಿದ್ದು, ಈ ಬಗ್ಗೆ ಖಚಿತಪಡಿಸಿಕೊಳ್ಳಲು ಸಮಿತಿಯನ್ನು ರಚಿಸುವುದು ಮತ್ತು ನಿಯಮವನ್ನು ಉಲ್ಲಂಘನೆ ಮಾಡುವ ಶಾಲೆಗಳಿಗೆ ದಂಡವನ್ನು ವಿಧಿಸುವ ಜೊತೆಗೆ ಮಾನ್ಯತೆಯನ್ನು ರದ್ದುಪಡಿಸುವಂತಹ ಕಠಿಣವಾದ ನಿಯಮಗಳನ್ನು ಜಾರಿಗೊಳಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

## 05. ಸದಸ್ಯರ ಖಾಸಗಿ ಕಾರ್ಯಕಲಾಪ

**ಖಾಸಗಿ ವಿಧೇಯಕ ಮಂಡನೆ**

**ಕರ್ನಾಟಕ ಅಸಲು ಹಣಕ್ಕಿಂತ ಹೆಚ್ಚು ಬಡ್ಡಿ ವಿಧಿಸುವಿಕೆ ನಿಷೇಧ ಅಧಿನಿಯಮ, 2017:-**

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ** (ವಿಧಾನ ಪರಿಷತ್ತಿನ ಮಾನ್ಯ ಸದಸ್ಯರು) ಅವರು:-

ಅ) 2017ನೇ ಸಾಲಿನ "**ಕರ್ನಾಟಕ ಅಸಲು ಹಣಕ್ಕಿಂತ ಹೆಚ್ಚು ಬಡ್ಡಿ ವಿಧಿಸುವಿಕೆ ನಿಷೇಧ ಅಧಿನಿಯಮ**"ವನ್ನು ಮಂಡಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**